**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**ಸಿ.ಸಿ.ನಂ.51/2015**

**ದಿನಾಂಕಃ 09.01.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | | | |
|---|---|---|---|
| ಸಾಕ್ಷಿಯ ಹೆಸರು | ಃ | ಗೋವಿಂದಪ್ಪ | ಚಾಸಾ-12, ಪ್ರಾಸ.-7 |
| ತಂದೆಯ ಹೆಸರು | ಃ | ಕೆಂಚಪ್ಪ | |
| ವಯಸ್ಸು | ಃ | 70 ವರ್ಷ | |
| ಉದ್ಯೋಗ | ಃ | ವ್ಯವಸಾಯ | |
| ವಾಸ | ಃ | ಚಿಕ್ಕಬಾಸೂರು | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಆರೋಪಿತರ ಪರಿಚಯ ಇರುತ್ತಾರೆ. ನನಗೆ ಯಾವುದೇ ವಿಷಯ ನೆನಪಿರುವುದಿಲ್ಲ. ಚಾಸಾ-1 ರವರು ಮಹಜರ್ ಗೆ ಕರೆದುಕೊಂಡು ಹೋಗಿರುತ್ತಾರೆ, ಪೋಲಿಸರು ನನ್ನ ಹೆಬ್ಬೆಟ್ಟಿನ ಗುರುತನ್ನು ಪಡೆದುಕೊಂಡಿರುತ್ತಾರೆ. ಸಾಕ್ಷಿ ತನ್ನ ಹೆಬ್ಬೆಟ್ಟಿನ ಗುರುತನ್ನು ಗುರುತಿಸಿದ್ದರಿಂದ ಅದನ್ನು ನಿಪಿ-6(ಸಿ) ಎಂದು ಗುರುತಿಸಲಾಯಿತು. ಮಹಜರ್ ನಲ್ಲಿ ಏನು ಬರೆದಿದೆ ಎಂದು ನೆನಪಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ**

ಚಾಸಾ-4 ರವರು ದಿಃ 23.10.2013 ರಂದು ನನ್ನ ಮತ್ತು ಚಾಸಾ-5 ರವರ ಸಮಕ್ಷಮ ನಿಪಿ-7 ನ್ನು ಪೋಲಿಸರಿಗೆ ಹಾಜರುಪಡಿಸಿದರು ಎಂದರೆ ಸರಿಯಲ್ಲ, ಸಾಕ್ಷಿ ಮುಂದುವರೆದು ಚಾಸಾ-4 ರವರು ಹಾಜರುಪಡಿಸಿದ ಬಗ್ಗೆ ತಿಳಿದಿದೆ ಆದರೆ ದಿನಾಂಕ ನೆನಪಿಲ್ಲ ಎಂದು ನುಡಿಯುತ್ತಾರೆ ಮತ್ತು ಮುಂದುವರೆದು ನಾನು ಒಬ್ಬನೇ ಇದ್ದೆ ಎಂದು ನುಡಿಯುತ್ತಾರೆ. ಸದರಿ ಮಹಜರನ್ನು ಬೆಳಗ್ಗೆ 10.00 ರಿಂದ 10.45 ರವರೆಗೆ ಠಾಣೆಯಲ್ಲಿ ತಯಾರಿಸಲಾಯಿತು ಎಂದರೆ ಸರಿ.

**<u>ಪಾಟೀಸವಾಲುಃ ಶ್ರೀ ಬಿ ಆರ್  ಆರೋಪಿ ಪರ ವಕೀಲರಿಂದಃ</u>**

ಚಾಸಾ-1 ರವರು ನನ್ನನ್ನು ಠಾಣೆಗೆ ಕರೆದುಕೊಂಡು ಹೋಗಿರುತ್ತಾರೆ, ನನ್ನನೊಂದಿಗೆ ಚಾಸಾ-4 ಇದ್ದರು.  ನನ್ನ ಸಮಕ್ಷಮ ಚಾಸಾ-1 ಮಲ್ಲಪ್ಪರವರು ದಾಖಲೆ ಪೋಲಿಸರಿಗೆ ನೀಡಿರುತ್ತಾರೆ.  ಯಾವ ದಾಖಲೆ ಹಾಜರುಪಡಿಸಿದರು ಎಂದು ತಿಳಿದಿರುವುದಿಲ್ಲ.  ನನ್ನ ಎಷ್ಟು ಹೆಬ್ಬೆಟ್ಟಿನ ಗುರುತು ಪಡೆಯಲಾಯಿತು ಎಂದು ತಿಳಿದಿರುವುದಿಲ್ಲ.  ಯಾವ ವಿಷಯಕ್ಕೆ ಹೆಬ್ಬೆಟ್ಟಿನ ಗುರುತನ್ನು ಪಡೆಯಲಾಯಿತು ಎಂದು ತಿಳಿಸಿರುವುದಿಲ್ಲ.  ನಿಪಿ-6 ರಲ್ಲಿ ಏನು ಬರೆದಿದೆ ಎಂದು ತಿಳಿದಿರುವುದಿಲ್ಲ.  ಚಾಸಾ-4 ರವರ ನನ್ನೊಂದಿಗೆ ವಿಶ್ವಾಸದಿಂದ ಇದ್ದಾರೆ. ಚಾಸಾ-4 ರವರ ವಿಶ್ವಾಸದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.  ಚಾಸಾ-4 ರವರು ನನ್ನನ್ನು ನ್ಯಾಯಾಲಯಕ್ಕೆ ಕರೆದುಕೊಂಡು ಬಂದಿರುತ್ತಾರೆ. ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲಾ</u>**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ ಎ ಒ

Sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.